ಅ) ಈ ಕೊರತೆಯನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಒಬ್ಬ ಶಿಕ್ಷಕರಿಗೆ 1 ಕೊಠಡಿಯಂತೆ 112 ಕೊಠಡಿಗಳು ಕೊರತೆಯಿದೆ.

ಆ) ಹಣದ ಲಭ್ಯತೆಯನ್ನು ಅನುಸರಿಸಿ ಹಂತಹಂತವಾಗಿ ಕೊಠಡಿ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು.

ಬಸವನ ಬಾಗೇವಾಡಿ ಮತಕ್ಷೇತ್ರದಲ್ಲಿ ಖಾಲಿ ಇರುವ ಪ್ರಾಥಮಿಕ ಶಿಕ್ಷಕರ ಹುದ್ದೆಗಳು

4592 - ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನ ಬಾಗೇವಾಡಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲೆಯ ಬಸವನ ಬಾಗೇವಾಡಿ ಮತಕ್ಷೇತ್ರದಲ್ಲಿ ಖಾಲಿ ಇರುವ ಪ್ರಾಥಮಿಕ ಶಾಲಾ ಶಿಕ್ಷಕರ ಸಂಖ್ಯೆ ಎಷ್ಟು?

ಆ) ಸದರಿ ಶಿಕ್ಷಕರ ಹುದ್ದೆಗಳು ಎಂದಿನಿಂದ ಖಾಲಿ ಇರುತ್ತವೆ?

ಇ) ಈ ರೀತಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) 66

ಆ) ಈ ಹುದ್ದೆಗಳು ನವೆಂಬರ್ 1999 ರಿಂದ ಖಾಲಿ ಇರುತ್ತವೆ.

ಇ) ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡುವ ಬಗ್ಗೆ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಬಸವನ ಬಾಗೇವಾಡಿ ಕ್ಷೇತ್ರದಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳು

4593 - ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನ ಬಾಗೇವಾಡಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲೆಯ ಬಸವನಬಾಗೇವಾಡಿ ಮತಕ್ಷೇತ್ರದಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರ ಮತ್ತು ಇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು? (ಹುದ್ದೆವಾರು ಮಾಹಿತಿ ಒದಗಿಸುವುದು)

ಆ) ಸದರಿ ಹುದ್ದೆಗಳು ಎಂದಿನಿಂದ ಖಾಲಿ ಇರುತ್ತದೆ?